ಸದರೀ ದರಖಾಸ್ತುದಾರನಾದ ಹೊನ್ನಪ್ಪನ ಅರ್ಜಿಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು ೧೭ರಲ್ಲು ಮೈಸೂರು ಮೊಕ್ಕಾಮಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವ್ಯತಪಟ್ಟ ಪರಮೇಶ್ವರಶೆಟ್ಟಿ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವೀ ಅರ್ಜೀ ನಂಬರ್ 136.

ವ್ಯತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬನ ಆಸ್ತಿ ವಿಷಯದಲ್ಲಿ—

ಅರ್ಜೀದಾರ ಖಾಜಿ ಸೈದ್ ನಸರಹುಸ್ಸೇನ್‌ಸಾಬಿ, ವ್ಯತಪಟ್ಟ ಸದರೀ ಖಾಜಿಸೈದ್ ಅಹಮ್ಮದ್ ಸಾಬರಿಗೆ ಮಗ ಆಗಬೇಕೆಂಬ ಹಕ್ಕುದಾರಿ ಮೇಲೆ ಮೈಸೂರು ಸ್ಥಳದ ಸದರೀ ಖಾಜಿಸೈದ್ ನಸರಹುಸ್ಸೇನ್ ಸಾಬಿ, ಸದರೀ ವಾಸಸ್ಥನಾಗಿ ವ್ಯತಪಟ್ಟ ಖಾಜಿ ಸೈದ್ ಅಹಮ್ಮದ್ ಸಾಬಿ ಜೆಂದಗೀ ಬಗ್ಯಾಗಿ ಬರತಕ್ಕ 1,000 ರೂಪಾಯಿಗಳ ಸಾಲಗಳನ್ನು ವಸೂಲ್ಮಾಡುವದಕ್ಕೆ 1860ನೇ ಇಸವಿ 27ನೇ ಆಕ್ಟು ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾನೆ.

ಸದರೀ ದರಖಾಸ್ತುದಾರನಾದ ಖಾಜಿಸೈದ್ ನಸರಹುಸ್ಸೇನ್‌ಸಾಬಿ ಅರ್ಜೀಯನ್ನು 1884ನೇ ಇಸವಿ ಜೂನ್ ತಿಂಗಳು ತಾರೀಖು 24ರಲ್ಲು ಮೈಸೂರು ಮೊಕ್ಕಾಂ ಈ ಕೋರ್ಟಿನಲ್ಲಿ ಕೇಳಿ ಸರ್ಟಿಫಿಕೇಟ್ ಪಡಿಯತಕ್ಕ ಬಾಧ್ಯತೆಯನ್ನು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ವ್ಯತಪಟ್ಟ ಖಾಜಿಸೈದ್ ಅಹಮ್ಮದ ಸಾಬರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರಿರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

1884ನೇ ಇಸವಿ ಏಪ್ರಿಲ್ ತಿಂಗಳು 3ನೇ ತಾರೀಖಿನಲ್ಲಿ ಕೋರ್ಟು ಮೊಹರ್ ಮತ್ತು ನಮ್ಮದಸ್ತಖತ್ತೊಡನೆ ಕೊಡೋಣಾಗಿದೆ.

ವಿ. ಎ. ನರಸಿಹ್ಮಯ್ಯಂಗಾರ್,
ಡಿಸ್ಟ್ರಿಕ್ಟು ಜಡ್ಜ್.

ಇಸ್ತಿಹಾರ್ ನಾಮಾ.

ತಾರೀಖು 3ನೇ ಮಾರ್ಚೀ 1884.

ಇದರಿಂದ ಪ್ರಕಟಪಡಿಸುವದೇನಂದರೆ, ಚಾಮರಾಜನಗರ ತಾಲ್ಲೂಕಿನಲ್ಲಿ ಖೆಡ್ಡಾಯಾನೆ ಆನೆಗಳನ್ನು ಹಿಡಿಯತಕ್ಕ ಕೆಲಸ ನಡಿಸಲ್ಪಡುವದರಿಂದ ಸಾಲ್ ಮಜಕೂರ್ ಮೇ 1ನೇ ಮಕ್ಕಂ ಲಾಗಾಯತು ಆಗಸ್ಟು 31ನೇ ಮಕ್ಕಂವರಿಗೆ, ಚಾಮರಾಜನಗರಕ್ಕೂ, ಹುಣಸೂರಿಗೂ, ಮಧ್ಯದಲ್ಲಿರುವ ಸರ್ಕಾರದ ರಸ್ತೆಗೆ ಪೂರ್ವ ದಿಕ್ಕಿನಲ್ಲಿರುವ ಯಾವ ಡಿಸ್ಟ್ರಿಕ್ಟು ಜಂಗ್ಲಿಯಲ್ಲಾಗಲಿ ಷಿಕಾರಿ ಆಡುವ ಬಗ್ಯೆ ಅಪ್ಪಣೆ ಕೊಡಲ್ಪಡುವದಿಲ್ಲವೆಂತ.

ಎ. ಕುಪ್ಪುಸಾಮಿ ಮೊದಲಿಯಾರ್,
ಫಾರ್ ಡೆಪ್ಯೂಟಿ ಕಮ್ಮಿಷನರ್.

ಕಡೂರು ಡಿಸ್ಟ್ರಿಕ್ಟು.

ತಾರೀಖು 26ನೇ ಮಾರ್ಚೀ 1884.

ಇದರಿಂದ ತಿಳಿಯಪಡಿಸುವದೇನಂದರೆ, ಮೊಡಿಗೆರೇ ತಾಲ್ಲೂಕು ಸಬ್ ರಿಜಿಸ್ಟ್ರಾರ್ ಆಫೀಸಿನಲ್ಲಿ ಬೇವಾರಸಾಗಿ ಯಿರತಕ್ಕ ಕೆಳಗೆ ವಿವರಿಸೋಣಾದ ದಸ್ತಾವೇಜನ್ನು ಹಾಜರ್ ಮಾಡಿದವರೇ ಆಗಲಿ ಅಥವಾ ವಾಪಸ್ ಪಡಿಯಲಿಕ್ಕೆ ಅವರಿಂದ ಕ್ರಮವಾದ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರರೆ ಆಗಲಿ ಈ ನೋಟೀಸ್ ತಾರೀಖು ಲಾಗಾಯತು ವರ್ಷ ತಿಂಗಳ ಒಳಗಾಗಿ ಸಬ್ ರಿಜಿಸ್ಟ್ರಾರ್ ರೂಬರೂಲು ಹಾಜರಾಗಿ ಅದನ್ನ ವಾಪಸು ತೆಗದುಕೊಳ್ಳಬೇಕು. ತಪ್ಪಿದರೆ ಸ॥ 1877ನೇ ಇಸವಿ 3ನೇ ನಂಬರ್ ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ, ಅದು ನಾಪಸಡಿಸಲ್ಪಡುವದು.

ದಸ್ತಾವೇಜು ನಂಬರ್.	ದಸ್ತಾವೇಜು ರಿಜಿಸ್ಟ್ರಿಗೆ ಹಾಜರಾದ ತಾರೀಖು.	ರಿಜಿಸ್ಟರು ತಾರೀಖು	ದಸ್ತಾವೇಜನ್ನು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ಬರಿಸಿಕೊಂಡವರ ಹೆಸರು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
73 1881—82	15—2—82	15—2—82	ಈರಮ್ಮ ಹೆಗ್ಗಡತಿ ನಿರ್ವಾಣಿ ಗೌಡನ ಪೆಂಡತಿ	ಗೋಪೀಬೀಡು ತಿಮ್ಮಶೆಟ್ಟಿ	95—12—0ಗೆ ತನ್ನ ಬಾಬುತು 34ನೇ ನಂಬರ್ ಹುಲ್ಲು ಮನೇ ದೀಡು ಮಾಡಿರುವದಾಗಿ.

ಮಹಮ್ಮದ್‌ಅಲ್ಲಿ,
ಫಾರ್ ರಿಜಿಸ್ಟ್ರಾರ್.

ತಾರೀಖು 1ನೇ ಏಪ್ರಿಲ್ 1884.

ಇದರಿಂದ ತಿಳಿಯಪಡಿಸುವದೇನಂದರೆ, ತರೀಕೆರೇ ತಾಲ್ಲೂಕು ಸಬ್ ರಿಜಿಸ್ಟ್ರೀ ಆಫೀಸಿನಲ್ಲಿ ಬೇವಾರಸಾಗಿ ಯಿರತಕ್ಕ ಕೆಳಗೆ ವಿವರಿಸೋಣಾದ ದಸ್ತಾವಜನ್ನು ಹಾಜರ್ ಮಾಡಿದವನೇ ಯಾಗಲಿ ಅಥವಾ ವಾಪಸು ಪಡಿಯಲಿಕ್ಕೆ ಅವನಿಂದ ಕ್ರಮವಾಗಿ ಅಧಿಕಾರ ಹೊಂದಿದ ಮುತಾಲೀಕ ಯಾ ಹಕ್ಕುದಾರನೇ ಯಾಗಲೀ ಈ ನೋಟೀಸು ತಾರೀಖು ಲಗಾಯಿತು ವಂದು ತಿಂಗಳೊಳಗಾಗಿ ಸಬ್ ರಿಜಿಸ್ಟ್ರಾರ್ ರೂಬರೂ ಖ ಹಾಜರಾಗಿ ಅದನ್ನು ವಾಪಸು ತೆಗದುಕೊಳ್ಳಬೇಕು, ತಪ್ಪಿದರೆ 1877ನೇ ಇಸವಿ 3ನೇ ನಂಬರು ರಿಜಿಸ್ಟ್ರೇಷನ್ ಆಕ್ಟು 85ನೇ ಸೆಕ್ಷನ್ ಅನುಸರಿಸಿ ಅದು ನಾಶಪಡಿಸಲ್ಪಡುವದು.

ನಂಬರ್.	ದಸ್ತಾವೇಜು ಬರದು ಕೊಟ್ಟವರ ಹೆಸರು ಮತ್ತು ವಾಸಸ್ಥಳ.	ದಸ್ತಾವೇಜು ಬರಿಸಿಕೊಂಡವರ ಹೆಸರು ಮತ್ತು ವಾಸಸ್ಥಳ.	ರಿಜಿಸ್ಟ್ರಿಗೆ ಹಾಜರಾದ ತಾರೀಖು.	ರಿಜಿಸ್ಟರು ತಾರೀಖು.	ದಸ್ತಾವೇಜಿನ ಸ್ವಭಾವ ಮತ್ತು ಕಿಮ್ಮತ್ತು.
112 1881—82	ಬುಕ್ಕಾಂಬುದಿ ಗ್ರಾಮದ ವಾಸಸ್ಥನಾದ ಕಡೂರು ನಂಜ	ಬುಕ್ಕಾಂಬುದಿ ಗ್ರಾಮದ ವಾಸಸ್ಥ ಶಾನಭೋಗ ರಾಮಯ್ಯ	15—3—82	15—3—82	ಬುಕ್ಕಾಂಬುದಿ ಕಸಬಾ ದೊಡ್ಡಕೆರೆ ಹಿಂದಣ ಸರ್ವೆ ನಂಬರ್ 168ನೇ ಗುಂಟೆ 30 ಆಕಾರ 11 ರೂಪಾಯಿವುಳ್ಳ ಬಾಗಾಯತು 300 ರೂಪಾಯಿಗೆ ಖರೀದಿಗೆಕೊಟ್ಟಿರುವದಾಗಿ.

ಜೆ. ಎಫ್. ಮೈಕಲ್‌ಜಾರ್ಜ್,
ರಿಜಿಸ್ಟ್ರಾರ್.

ಕ್ರಿಸ್ಟಲ್ಲೈಸ್ಡ್ ಸಿಂಕೋನಾ ಫೆಬ್ರಿಫ್ಯೂಜ್.

ಗವರ್ನಮೆಂಟ್ ಕೋಠೀಯಲ್ಲಿ ಕೆಂಪುವರ್ಣದ ಸಿಂಕೋನಾ ಸಟ್ಟೆಯಿಂದ ತಯಾರ್ ಮಾಡಲ್ಪಟ್ಟ ಹೊಸದಾದ ಮತ್ತು ಅಭಿವೃದ್ಧವಾದ ತಯಾರಿ—ಇದು ಸಾಧಾರಣವಾದ ಕ್ರಿಸ್ಟಲ್ಲೈಜ್ಡ್ ಅಲ್ಲದ ಫ್ಯಾಬ್ರಿಫ್ಯೂಜಿಗಿಂತ ಕ್ವಿನೈನಿಗೆ ಸಂಪೂರ್ಣವಾದ ಪ್ರತಿನಿಧಿಯಾಗಿದೆ. ಇದನ್ನು, ಕಲ್ಕತ್ತೆ ಬಿ॥ ಸೀಬ್‌ಪೋರ್ ಸಮಿಾಪದಲ್ಲಿ ರಾಯಲ್‌ಬೊಟಾನಿಕ್ ಗಾರ್ಡನ್ ಸೂಪರಿಟೆಂಡೆಂಟರಿಂದ ಗವರ್ನಮೆಂಟ್ ಆಫಿಸರ್‌ಗಳು ಸರ್ಕಾರಿಯಾದ ಮತ್ತು ಧರ್ಮಾರ್ಥವಾದ ಕೆಲಸಗಳಿಗಾಗಿ ಮತ್ತು ಬಂದು ಸಲಕ್ಕೆ ಇಪ್ಪತ್ತು ಪೌಂಡು ಮತ್ತು ಅದಕ್ಕೆ ಮೇಲ್ಪಟ್ಟು ತೆಗದುಕೊಳ್ಳವರು ನಗದಿಗಾಗಿಯೇ ಪೌಂಡ್ ಬಂದಕ್ಕೆ 24 ರೂಪಾಯಿಗಳ ದರ ಪ್ರಕಾರ ಕೊಂಡುಕೊಳ್ಳಬಹುದು. ರಾಯಲ್ ಬೊಟಾನಿಕ್ ಗಾರ್ಡನ್ ಸೂಪರಿಟೆಂಡೆಂಟರು ನಗದಿಗೇನೇ ಸಮುದಾಯವಾಗಿ ಪ್ರಜೆಗಳಿಗೆ ಮತ್ತು ಪೌಂಡ್ ಬಂದಕ್ಕೆ 32 ರೂಪಾಯಿಗಳ ಪ್ರಕಾರ ಮುಖ್ಯರಾದ ಯೂರೋಪಿಯರ್ಸ್ ಮತ್ತು ನೇಟಿವ್ ಡ್ರಗ್ಗಿಸ್ಟ್‌ಗಳು ಸರಬರಾಯಿ ಮಾಡತಕ್ಕದ್ದು. ಟಪ್ಪಾಲ್ ಹಾಸಲ್ ಹನ್ನೆರಡಾಣೆ ಜಾಸ್ತಿಯಿಲ್ಲ.

Mysore Government Press, Bangalore.—1884.